# ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ

Directorate of Medical Education.

ಆನಂದರಾವ್ ವೃತ್ತ, ಬೆಂಗಳೂರು-9

Ananda Rao Circle, Bangalore-9

ಸಂಖ್ಯೆ: ವೈಶಿನಿ/ಎನ್‌ಆರ್‌ಸಿ(1)/47/2018-19

ದಿನಾಂಕ: ೨೦-02-2019

## -:ಚಲನಾದೇಶ:-

ಸರ್ಕಾರದ ಆದೇಶ ಸಂಖ್ಯೆ: ಆಕುಕ 09 ಎಂಎಸ್‌ಎನ್ 2019, ಬೆಂಗಳೂರು ದಿನಾಂಕ: 06-02-2019ರ ಆದೇಶವನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಸದರಿ ಆದೇಶದಲ್ಲಿ 2018-19ನೇ ಸಾಲಿನ ಎಂ.ಎಸ್ಸಿ ನರ್ಸಿಂಗ್ ಸ್ನಾತಕೋತ್ತರ ವ್ಯಾಸಂಗಕ್ಕೆ ಆಯ್ಕೆಯಾಗಿರುವ ಸೇವಾನಿರತ ಶುಶ್ರೂಷಕರನ್ನು ಸರ್ಕಾರಿ ಆದೇಶದಲ್ಲಿ ವಿಧಿಸಿರುವ ಷರತ್ತುಗಳ ಪ್ರಕಾರ ಬಂಧಪತ್ರವನ್ನು ಪಡೆದು ನೌಕರರು ಎಂ.ಎಸ್ಸಿ ನರ್ಸಿಂಗ್ ವ್ಯಾಸಂಗಕ್ಕೆ ಹಾಜರಾಗಲು ಅನುಕೂಲವಾಗುವಂತೆ ಕೂಡಲೇ ಕರ್ತವ್ಯದಿಂದ ಬಿಡುಗಡೆ ಮಾಡಲು ತಿಳಿಸಿದೆ.

ಈ ವಿಷಯದಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ನಿರ್ದೇಶನಾಲಯಕ್ಕೆ ಜರೂರಾಗಿ ವರದಿ ನೀಡುವುದು.

"ನಿರ್ದೇಶಕರು ಆಕುಕ ಸೇವೆಗಳು
ಇವರ ಸಹಮತಿ ಪಡೆಯಲಾಗಿದೆ.

ನಿರ್ದೇಶಕರು
ವೈದ್ಯಕೀಯ ಶಿಕ್ಷಣ.
12/02/19

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:-

1. ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
2. ಅಧೀಕ್ಷಕರು ಸಿ, ಜಿ, ಆಸ್ಪತ್ರೆ ದಾವಣಗೆರೆ.
3. ಪ್ರಾಂಶುಪಾಲರು, ಬಾಪೂಜಿ ಕಾಲೇಜ್ ಆಫ್ ನರ್ಸಿಂಗ್, ದಾವಣಗೆರೆ.
4. ಶ್ರೀಮತಿ.ಪೂರ್ಣಿಮಾ. ಶುಶ್ರೂಕರು ಸಿ, ಜಿ, ಆಸ್ಪತ್ರೆ ದಾವಣಗೆರೆ
5. ಕಛೇರಿ ಪ್ರತಿ.

ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ
ಜಿ.ಆರ್.ಆರ್.ನಂ: 1533
11/02/2019
ಬೆಂಗಳೂರು-560 009

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2018-19ನೇ ಸಾಲಿನ ಎಂ.ಎಸ್ಸಿ. ನರ್ಸಿಂಗ್ ವ್ಯಾಸಂಗಕ್ಕೆ ಆಯ್ಕೆಯಾಗಿರುವ ಶ್ರೀಮತಿ ಪೂರ್ಣಿಮಾ ... ನಿಯೋಜಿಸುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ವೈಶಿನಿ/ಎನ್ಆರ್ಸಿ(1)/47/2018-19 ದಿನಾಂಕ: 14/01/2019

NRC(1)

******

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ 2018-19ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಂ.ಎಸ್ಸಿ ನರ್ಸಿಂಗ್ ಸ್ನಾತಕೋತ್ತರ ವ್ಯಾಸಂಗಕ್ಕೆ ಸರ್ಕಾರಿ ಹಾಗೂ ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರು ನಡೆಸಿರುವ ಪ್ರವೇಶ ಪರೀಕ್ಷೆ ಮತ್ತು ಮೀಸಲಾತಿಗನುಗುಣವಾಗಿ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 259 ಆರ್‌ಜಿಯು 2018, ದಿನಾಂಕ: 23/08/2018 ರಲ್ಲಿನ ಸೀಟ್‌ಮ್ಯಾಟ್ರಿಕ್ಸ್ ಅನುಗುಣವಾಗಿ ಮೊದಲನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಶ್ರೀಮತಿ ಪೂರ್ಣಿಮಾ ವಿ. ಶುಶ್ರೂಷಕಿ, ಸಿ.ಜಿ. ಆಸ್ಪತ್ರೆ, ದಾವಣಗೆರೆ ಇವರು ಬಾಪೂಜಿ ಕಾಲೇಜ್ ಆಫ್ ನರ್ಸಿಂಗ್, ದಾವಣಗೆರೆ ಇಲ್ಲಿಗೆ ಆಯ್ಕೆಗೊಂಡಿರುತ್ತಾರೆಂದು ತಿಳಿಸಿರುತ್ತಾರೆ. ಹಾಗೂ ಸದರಿ ಶುಶ್ರೂಷಕರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಬಾಕಿ ಇರುವುದಿಲ್ಲವೆಂದು ಮತ್ತು ಸಕ್ಷಮ ಪ್ರಾಧಿಕಾರದಿಂದ ಉನ್ನತ ವ್ಯಾಸಂಗಕ್ಕೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪತ್ರವನ್ನು ಪಡೆದಿರುವುದಾಗಿ ಮತ್ತು ಸದರಿಯವರ ಸ್ನಾತಕೋತ್ತರ ವ್ಯಾಸಂಗದ ನಿಯೋಜನೆಗೆ ಸಹಮತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದಿಂದ ಪಡೆದಿರುವುದಾಗಿ ತಿಳಿಸಿರುತ್ತಾರೆ ಹಾಗೂ ಸದರಿ ನೌಕರರಿಗೆ ಪ್ರಥಮ ನಿಯೋಜನೆಯಾಗಿದ್ದು, ಕರ್ನಾಟಕ ನಾಗರೀಕ ಸೇವಾ ನಿಯಮ 61ರ ಅಪೆಂಡಿಕ್ಸ್-II-ಎ ಪ್ರಕಾರ ವೇತನ ಸಹಿತ ನಿಯೋಜನಾ ಸೌಲಭ್ಯಗಳೊಂದಿಗೆ ಹಾಗೂ ಪ್ರಥಮ ನಿಯೋಜನಾ ಸೌಲಭ್ಯ ಪಡೆಯುವವರು ಕರ್ನಾಟಕ ನಾಗರೀಕ ಸೇವಾ ನಿಯಮ 61ರ ಅಪೆಂಡಿಕ್ಸ್-II-ಎ ಪ್ರಕಾರ ನಮೂನೆ 19ರಲ್ಲಿ ಬಂಧಪತ್ರವನ್ನು ವ್ಯಾಸಂಗಕ್ಕೆ ಹಾಜರಾಗಲು ಕರ್ತವ್ಯದಿಂದ ಬಿಡುಗಡೆಯಾಗುವ ಮುನ್ನ ತಮ್ಮ ಮೇಲಾಧಿಕಾರಿಗಳಿಗೆ ಸಲ್ಲಿಸುವ ಷರತ್ತಿಗೊಳಪಟ್ಟು ಮತ್ತು ಸ್ನಾತಕೋತ್ತರ ವ್ಯಾಸಂಗ ಮುಗಿಸಿದ ನಂತರ 10 ವರ್ಷಗಳ ಕಾಲ ಸರ್ಕಾರಿ ಸೇವೆ ಸಲ್ಲಿಸುವ ಷರತ್ತನ್ನು ನಿಗದಿಪಡಿಸಬೇಕೆಂದು ತಿಳಿಸುತ್ತಾ, ಸದರಿ ಶುಶ್ರೂಷಕರನ್ನು ಎಂ.ಎಸ್ಸಿ. ನರ್ಸಿಂಗ್ ಸ್ನಾತಕೋತ್ತರ ವ್ಯಾಸಂಗಕ್ಕೆ ನಿಯೋಜಿಸುವ ಬಗ್ಗೆ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಅದರಂತೆ ಸರ್ಕಾರವು ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, 2018-19ನೇ ಸಾಲಿನ ಎಂ.ಎಸ್ಸಿ. (ನರ್ಸಿಂಗ್) ವ್ಯಾಸಂಗಕ್ಕೆ (ಪೀಡಿಯಾಟ್ರಿಕ್ ನರ್ಸಿಂಗ್) ಮೊದಲನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಬಾಪೂಜಿ ಕಾಲೇಜ್ ಆಫ್ ನರ್ಸಿಂಗ್, ದಾವಣಗೆರೆ ಇಲ್ಲಿಗೆ ಆಯ್ಕೆಗೊಂಡಿರುವ ಶ್ರೀಮತಿ ಪೂರ್ಣಿಮಾ ವಿ. ಶುಶ್ರೂಷಕಿ ಸಿ.ಜಿ. ಆಸ್ಪತ್ರೆ, ದಾವಣಗೆರೆ, ಇವರ ಪ್ರಥಮ ನಿಯೋಜನೆಗೆ ಅನುಮತಿಸಲು ಸರ್ಕಾರ ತೀರ್ಮಾನಿಸಿದೆ. ಅದರಂತೆ ಈ ಆದೇಶ:-

ಸರ್ಕಾರದ ಆದೇಶ ಸಂಖ್ಯೆ: ಆಕುಕ 09 ಎಂಎಸ್ಎನ್ 2019
ಬೆಂಗಳೂರು, ದಿನಾಂಕ:06-02-2019

616
12/02/19

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಂ.ಎಸ್ಸಿ. ನರ್ಸಿಂಗ್ ವ್ಯಾಸಂಗಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರು ನಡೆಸಿರುವ ಪ್ರವೇಶ ಪರೀಕ್ಷೆಯಲ್ಲಿ ತೇರ್ಗಡೆಯಾಗಿ

ಮೊದಲನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಬಾಪೂಜಿ ಕಾಲೇಜ್ ಆಫ್ ನರ್ಸಿಂಗ್, ದಾವಣಗೆರೆ ಇಲ್ಲಿಗೆ ಆಯ್ಕೆಗೊಂಡಿರುವ ಶ್ರೀಮತಿ ಪೂರ್ಣಿಮಾ ವಿ. ಶುಶ್ರೂಷಕಿ ಸಿ.ಜಿ. ಆಸ್ಪತ್ರೆ, ದಾವಣಗೆರೆ, ಇವರನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 61 ರಲ್ಲಿನ ಅಪೆಂಡಿಕ್ಸ್– II (ಎ)–1 ರ ಉಪನಿಯಮ (1) ರಿಂದ (10) ರವರೆಗಿನ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಟ್ಟು, ಪ್ರಥಮ ಬಾರಿಗೆ ಪ್ರತಿ ನಿಯೋಜನಾ ಸೌಲಭ್ಯದೊಂದಿಗೆ ಎಂ.ಎಸ್ಸಿ. (ನರ್ಸಿಂಗ್) ಉನ್ನತ ವ್ಯಾಸಂಗಕ್ಕೆ (ಪೀಡಿಯಾಟ್ರಿಕ್ ನರ್ಸಿಂಗ್) ನಿಯೋಜಿಸಲು ಸರ್ಕಾರವು ಅನುಮತಿ ನೀಡಿದೆ.

ಈ ಆದೇಶವು ಸದರಿ ಶುಶ್ರೂಷಕರು ಎಂ.ಎಸ್ಸಿ. (ನರ್ಸಿಂಗ್) ವ್ಯಾಸಂಗ ಮುಗಿಸಿದ ನಂತರ 10 ವರ್ಷಗಳ ಕಾಲ ಕಡ್ಡಾಯವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸತಕ್ಕದ್ದು ಎಂಬ ಷರತ್ತಿಗೆ ಒಳಪಟ್ಟಿರುತ್ತದೆ. ಹಾಗೂ ಸದರಿ ಅಭ್ಯರ್ಥಿ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಬಾಕಿ ಇರುವುದಿಲ್ಲವೆಂದು ಸಂಬಂಧಪಟ್ಟ ಪ್ರಾಧಿಕಾರವು ಮತ್ತೊಮ್ಮೆ ಖಚಿತಪಡಿಸಿಕೊಂಡು, ನಿಯಮಗಳಡಿಯಲ್ಲಿ ನಿಗಧಿತ ನಮೂನೆಯಲ್ಲಿದ್ದಂತೆ (ಫಾರ್ಮ್–19) ಬಂಧ ಪತ್ರವನ್ನು ಸದರಿ ಶುಶ್ರೂಷಕರಿಂದ ಪಡೆಯತಕ್ಕದ್ದು ಎಂಬ ಷರತ್ತಿಗೆ ಒಳಪಟ್ಟಿರುತ್ತದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಎಸ್‌ಆರ್‌ಎ 2008, ದಿನಾಂಕ:5–06–2008 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ಲಕ್ಷ್ಮಣ)
ಸರ್ಕಾರದ ಉಪ ಕಾರ್ಯದರ್ಶಿ–1
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಜಿ.&ಎಸ್.ಎಸ್.ಎ), & (ಇ.&ಆರ್.ಎಸ್.ಎ.), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು–9
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು–9
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
6. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ದಾವಣಗೆರೆ ಜಿಲ್ಲೆ.
7. ಜಿಲ್ಲಾ ಶಸ್ತ್ರ ಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ದಾವಣಗೆರೆ.
8. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
9. ಪ್ರಾಂಶುಪಾಲರು, ಬಾಪೂಜಿ ಕಾಲೇಜ್ ಆಫ್ ನರ್ಸಿಂಗ್, ದಾವಣಗೆರೆ. (ನಿರ್ದೇಶಕರ ಮುಖಾಂತರ)
10. ಶ್ರೀಮತಿ ಪೂರ್ಣಿಮಾ ವಿ. ಶುಶ್ರೂಷಕಿ ಸಿ.ಜಿ. ಆಸ್ಪತ್ರೆ, ದಾವಣಗೆರೆ, ದಾವಣಗೆರೆ ಜಿಲ್ಲೆ.
11. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಕುಕ ಇಲಾಖೆ, ವಿಕಾಸಸೌಧ, ಬೆಂಗಳೂರು.
2) ಸರ್ಕಾರದ ಉಪ ಕಾರ್ಯದರ್ಶಿ–1 ರವರ ಆಪ್ತ ಸಹಾಯಕರು, ಆಕುಕ ಇಲಾಖೆ, ವಿಕಾಸಸೌಧ, ಬೆಂಗಳೂರು.